ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ:-ಎಡಿಎಂ2(1)ರಾಜ್ಯ/ರಾಷ್ಟ್ರ/ವಿ.ನಿ.ಶಿ-58/2017-18 ದಿನಾಂಕ:-19-11-2018

**<u>ಜ್ಞಾಪನ</u>**

ವಿಷಯ:- ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪ್ರಾಥಮಿಕ ಮತ್ತು ಪ್ರೌಢಶಾಲಾ ನಿವೃತ್ತ ಶಿಕ್ಷಕರಿಗೆ ಉಚಿತ ಬಸ್‌ಪಾಸ್ ನೀಡುವ ಬಗ್ಗೆ.

ಉಲ್ಲೇಖ:-1]ಸರ್ಕಾರದ ಆದೇಶ ಸಂಖ್ಯೆ: ಇಡಿ 231 ಪಿಬಿಎಸ್ 2018, ಬೆಂಗಳೂರು, ದಿನಾಂಕ:-22.09.2018.

2]ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ:-03.04.2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಉಲ್ಲೇಖಿತ ಪತ್ರದಲ್ಲಿ ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನಿವೃತ್ತ ಶಿಕ್ಷಕರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉಚಿತ ಪ್ರಯಾಣಕ್ಕಾಗಿ ಬಸ್‌ಪಾಸ್‌ಗಳನ್ನು ನೀಡಲು ಷರತ್ತಿಗೊಳಪಟ್ಟು ಅನುಮತಿ ನೀಡಿ ಆದೇಶವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಕೆಳಕಂಡ ಷರತ್ತುಗಳನ್ನು ವಿಧಿಸಿ ಅನುಮತಿ ನೀಡಿದೆ.

**<u>ಷರತ್ತುಗಳು:-</u>**

1. ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ಉಚಿತ ಬಸ್‌ಪಾಸ್ ವಿತರಣೆಗೆ ಅಗತ್ಯವಾದ ಅನುದಾನವನ್ನು ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿಯಡಿ ಲಭ್ಯವಿರುವ ಅನುದಾನದಿಂದ ಪ್ರತಿ ವರ್ಷ ಭರಿಸತಕ್ಕದ್ದು.
2. ಸಹ ನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ ಇವರು ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ವೇದಿಕೆ (ರಿ), ಬೆಂಗಳೂರು ಇವರಿಂದ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರ ಹೆಸರು, ವಿಳಾಸ, ಪ್ರಶಸ್ತಿ ಪತ್ರಗಳ ದೃಢೀಕೃತ ಪ್ರತಿ, ಆಧಾರ್ ಕಾರ್ಡ್ ಪ್ರತಿ, ಸ್ವಯಂ ದೃಢೀಕರಣ ಪತ್ರ ಮೊದಲಾದ ದಾಖಲೆಗಳನ್ನೊಳಗೊಂಡ ಪ್ರಸ್ತಾವನೆಗಳನ್ನು ಪಡೆದು, ನಿಯಮಾನುಸಾರ ಪರಿಶೀಲಿಸುವುದು.
3. ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ವೇದಿಕೆಯು ದೃಢೀಕರಿಸಿ ನೀಡಿರುವ ದಾಖಲೆಗಳನ್ನು ಆಧರಿಸಿ ರಾಜ್ಯ ಮಟ್ಟದ ಪ್ರಶಸ್ತಿ, ರಾಷ್ಟ್ರ ಪ್ರಶಸ್ತಿ ಹಾಗೂ ಎರಡೂ ಪ್ರಶಸ್ತಿಗಳನ್ನು ಪಡೆದ ನಿವೃತ್ತ ಶಿಕ್ಷಕರ ಯಾದಿಯನ್ನು ಪ್ರತ್ಯೇಕವಾಗಿ ಸಿದ್ಧಪಡಿಸತಕ್ಕದ್ದು.
4. ಒಬ್ಬರೇ ಶಿಕ್ಷಕರು ಎರಡೂ ಪ್ರಶಸ್ತಿಗಳನ್ನು ಪಡೆದಿದ್ದರೂ ಸಹ ಒಂದೇ ಉಚಿತ ಬಸ್‌ಪಾಸ್ ಸೌಲಭ್ಯ ನೀಡತಕ್ಕದ್ದು.
5. ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರು ನಿಯಮಿತವಾಗಿ ಪಿಂಚಣಿ ಸೌಲಭ್ಯಗಳನ್ನು ಪಡೆಯುತ್ತಿರುವ ಬಗ್ಗೆ ಸಂಬಂಧಿಸಿದ ಪ್ರಾಧಿಕಾರಗಳಿಂದ ದೃಢೀಕರಣ ಪತ್ರಗಳನ್ನು ಪಡೆಯತಕ್ಕದ್ದು.
6. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಈಗಾಗಲೇ ಇತರೆ ಕ್ಷೇತ್ರಗಳಲ್ಲಿ ಪ್ರಶಸ್ತಿ ಪಡೆದ ಗಣ್ಯರಿಗೆ ಉಚಿತ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಿದ್ದಲ್ಲಿ, ಅಂತಹ ಉಚಿತ ಪಾಸ್‌ಗಳಿಗೆ ಭರಿಸುತ್ತಿರುವ ವೆಚ್ಚದಂತೆ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರ ಉಚಿತ ಪಾಸ್ ನೀಡಲು ಸಹ ತಗಲುವ ವೆಚ್ಚದ ವಿವರಗಳನ್ನು ಆಯುಕ್ತರು, ಸಾರಿಗೆ ಇಲಾಖೆ ಇವರಿಂದ ಪಡೆಯತಕ್ಕದ್ದು.

7. ಸಾರಿಗೆ ಇಲಾಖೆಯು ನೀಡಿರುವ ಪ್ರತಿ ಉಚಿತ ಬಸ್‌ಪಾಸ್‌ನ ವೆಚ್ಚದ ವಿವರಗಳನ್ನು ಆಧರಿಸಿ ಒಟ್ಟಾರೆ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರ ಸಂಖ್ಯೆಗೆ ಅನುಗುಣವಾಗಿ ಉಚಿತ ಬಸ್‌ಪಾಸ್ ವಿತರಣೆಗೆ ಭರಿಸಬೇಕಾದ ಮೊತ್ತವನ್ನು ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿಯಿಂದ ಸಾರಿಗೆ ಇಲಾಖೆಗೆ ಬಿಡುಗಡೆ ಮಾಡತಕ್ಕದ್ದು.
8. ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ವೇದಿಕೆ(ರಿ), ಬೆಂಗಳೂರು ಇವರಿಂದ ಪ್ರತಿ ವರ್ಷ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕರ ಮಾಹಿತಿಯನ್ನು ಪಡೆದು ಉಚಿತ ಬಸ್‌ಪಾಸ್‌ಗಳನ್ನು ನವೀಕರಿಸತಕ್ಕದ್ದು.

ಈ ಮೇಲ್ಕಂಡ ಎಲ್ಲಾ ಷರತ್ತುಗಳನ್ನು ವಿಧಿಸಿ ಸರ್ಕಾರದ ಆದೇಶದಂತೆ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳು ಅಗತ್ಯ ಕ್ರಮವಹಿಸುವಂತೆ ತಿಳಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ಇವರಿಗೆ;**

1. ಸಹ ನಿರ್ದೇಶಕರು/ಉಪ ನಿರ್ದೇಶಕರು ಹಾಗೂ ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇ., ಇವರಿಗೆ ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಅಗತ್ಯ ಕ್ರಮಕ್ಕಾಗಿ.

**ಮಾಹಿತಿಗಾಗಿ:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು ರವರ ಆಪ್ತ ಸಹಾಯಕರು ಇವರಿಗೆ ಮಾಹಿತಿಗಾಗಿ.
5. ಆಯುಕ್ತರು, ಸಾರಿಗೆ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅಪರ ಆಯುಕ್ತರು, ಧಾರವಾಡ ಮತ್ತು ಕಲಬುರಗಿ ಇವರಿಗೆ ಮಾಹಿತಿಗಾಗಿ.
7. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
9. ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ ಇವರುಗಳಿಗೆ ಮಾಹಿತಿಗಾಗಿ.
10. ಕಛೇರಿ ಪ್ರತಿ.